<u>ಅಸಲು ದಾವಾ ಸಂಖ್ಯೆ- **157/2023**</u> <u>ಪಿ.ಡಬ್ಲ್ಯೂ:-</u> **1**

ದಿನಾಂಕಃ **03-02-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-</u>

ದಾವಾ ಪತ್ರದಲ್ಲಿ ನಮೂದಾಗಿರುವ ವಿಚಾರಗಳನ್ನು ನಾನೇ ಹೇಳಿ ಬರೆಸಿರುತ್ತೇನೆ. ಕುಟುಂಬದ ಆಸ್ತಿಗಳಲ್ಲಿ ಭಾಗಾಂಶವನ್ನು ಕೋರಿ ದಾವೆಯನ್ನು ಸಲ್ಲಿಸಿದ್ದೆನು. 3 ನೇ ಪ್ರತಿವಾದಿ ಕತ್ತಿಗೆ ಗ್ರಾಮದ ವಾಸಿ. 1 ನೇ ಪ್ರತಿವಾದಿ ಐಟಂ ನಂ.1 ರ ಆಸ್ತಿಯನ್ನು 3 ನೇ ಪ್ರತಿವಾದಿ 2022-23 ನೇ ಸಾಲಿನಲ್ಲಿ ಖರೀದಿ ಮಾಡಿದ್ದಾರೆ. 3 ನೇ ಪ್ರತಿವಾದಿಯ ಹೆಸರಿಗೆ ದಾವಾ ಐಟಂ ನಂ.1 ರ ಆಸ್ತಿಯ ಕ್ರಯ ಪತ್ರದಂತೆ ಖಾತೆ ಮತ್ತು ಪಹಣಿ ಆಗಿದೆ ಎಂದರೆ ಸರಿ. 3 ನೇ ಪ್ರತಿವಾದಿ ಖರೀದಿ ಮಾಡಿದ ದಿನದಿಂದಲೂ ಇಲ್ಲಿಯವರೆಗೂ ಐಟಂ ನಂ.1 ರ ಆಸ್ತಿಯಲ್ಲಿ ಸ್ವಾಧೀನಾನುಭವದಲ್ಲಿದ್ದಾರೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾನು ಸ್ವಾಧೀನಾನುಭವದಲ್ಲಿ ಇದ್ದೇನೆ ಎಂದು ನುಡಿಯುತ್ತಾರೆ. 1 ನೇ ಪ್ರತಿವಾದಿ ತನ್ನ ಭಾಗಕ್ಕೆ ಬಂದಂತಹ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ನನಗೆ ಸೇರಿದ ಮತ್ತು 2 ನೇ ಪ್ರತಿವಾದಿಗೆ ಸೇರಿದ ಆಸ್ತಿಯನ್ನು ಮಾರಾಟ ಮಾಡಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯು ದಾವಾ ಐಟಂ ನಂ.1 ರ ಆಸ್ತಿಯನ್ನು 3 ನೇ ಪ್ರತಿವಾದಿಗೆ ಮಾರಾಟ ಮಾಡಿರುವ ವಿಚಾರ ಮತ್ತು ಸ್ವಾಧೀನಾನುಭವದಲ್ಲಿರುವ ವಿಚಾರ ಗೊತ್ತಿದ್ದರೂ ಸಹ ದಾವಾ ಐಟಂ ನಂ.1 ರ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳು ತ್ತಿದ್ದೇನೆ ಎಂದರೆ ಸರಿಯಲ್ಲ. ನಮ್ಮ ತಂದೆಗೆ ದಾವಾ ಆಸ್ತಿಗಳು ಭಾಗಾಂಶದ ಮೂಲಕ ಬಂದಿರುತ್ತವೆ. ದಾವಾ ಆಸ್ತಿಗಳಲ್ಲಿ 1 ನೇ ಪ್ರತಿವಾದಿಗೆ ಭಾಗಾಂಶದ ಮೂಲಕ 28 ಗುಂಟೆ ಜಮೀನು ಬರುತ್ತದೆ. ಅದರಲ್ಲಿ 21 ಗುಂಟೆ ಜಮೀನನ್ನು ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಇನ್ನೊಬ್ಬ ತಂಗಿಯ ಹೆಸರು ಗೀತಾ. ಗೀತಾ ಮರಣಹೊಂದಿರುತ್ತಾರೆ. ಗೀತಾರವರಿಗೆ 21 ವರ್ಷ ವಯಸ್ಸಿನ ಪೂಜಾ ಎಂಬ ಒಬ್ಬ ಹೆಣ್ಣು ಮಗಳು ಇದ್ದು. ಪೂಜಾರವರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸರಿ. ಪೂಜಾಳನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿ ದಾವಾ ಆಸ್ತಿಗಳನ್ನು 4 ಭಾಗಗಳನ್ನಾಗಿ ವಿಂಗಡಿಸಿದರೆ ತಲಾ 21 ½ ಗುಂಟೆ ಜಮೀನು ಬರುತ್ತದೆ ಎಂದರೆ ಸರಿ.

ನನ್ನ ತಾಯಿಯ ಹೆಸರಿನಲ್ಲಿರುವ ಮನೆ ಮತ್ತು ಖಾಲಿ ನಿವೇಶನವನ್ನು ಈ ದಾವೆಯಲ್ಲಿ ಸೇರಿಸಿರುವುದಿಲ್ಲ. ಮನೆ ಮತ್ತು ಖಾಲಿ ನಿವೇಶನ ನಮ್ಮ ತಂದೆಗೆ ಭಾಗಾಂಶದ ಮೂಲಕ ಬಂದಿದ್ದು ಅದನ್ನು ನನ್ನ ತಾಯಿಯ ಹೆಸರಿಗೆ ನಮ್ಮ ತಂದೆಯವರು ಮಾಡಿಸಿದ್ದಾರೆ ಎಂದು ನುಡಿಯುತ್ತಾರೆ. ನಮ್ಮ ತಂದೆಯವರು ಖಾಲಿ ನಿವೇಶನ ಮತ್ತು ಮನೆಗೆ ಆಸ್ತಿಯನ್ನು ಮಾರಾಟ ಮಾಡಿರುವುದಿಲ್ಲ. ಆದರೆ ಜಮೀನು ಮಾತ್ರ ಮಾರಾಟ ಮಾಡಿದ್ದಾರೆ ಎಂದು ನುಡಿಯುತ್ತಾರೆ. ನಮ್ಮ ತಂದೆಯವರು ನ್ಯಾಯಾಲಯಕ್ಕೆ ಬಂದರೆ ಸತ್ಯಾಂಶ ಹೊರಬರುತ್ತದೆ ಎಂಬ ಉದ್ದೇಶದಿಂದ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಮ್ಮ ತಂದೆಯವರು ಮಾರಾಟ ಮಾಡಿದ ಐಟಂ ನಂ.1 ರ ಆಸ್ತಿಯಲ್ಲಿ ನನಗಾಗಲೀ, 1 ಮತ್ತು 2 ನೇ ಪ್ರತಿವಾದಿಗಾಗಲೀ ಮತ್ತು ನನ್ನ ಇನ್ನೊಬ್ಬ ತಂಗಿಯ ಮಗಳಾದ ಪೂಜಾಳಿಗಾಗಲೀ ಯಾವುದೇ ಹಕ್ಕು ಮತ್ತು ಭಾಗಾಂಶ ಇಲ್ಲ ಎಂದರೆ ಸರಿಯಲ್ಲ. 3 ನೇ ಪ್ರತಿವಾದಿಯು ದಾವಾ  ಐಟಂ ನಂ.1 ರ ಆಸ್ತಿಯ ಮಾಲೀಕರಾಗಿದ್ದು ಅವರಿಗೆ ತೊಂದರೆ ಕೊಡುವ ಉದ್ದೇಶದಿಂದ ಅವರನ್ನು ಈ ದಾವೆಯಲ್ಲಿ ಅನಾವಶ್ಯಕವಾಗಿ ಪಕ್ಷಗಾರರನ್ನಾಗಿ ಮಾಡಿದ್ದೇವೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 3 ನೇ ಪ್ರತಿವಾದಿಯು 1 ನೇ ಪ್ರತಿವಾದಿಯಿಂದ ನಮ್ಮನ್ನು ಕೇಳದೇ ಖರೀದಿ ಮಾಡಿದ್ದರಿಂದ ಅವರ ವಿರುದ್ಧ ದಾವೆಯನ್ನು ಸಲ್ಲಿಸಿದ್ದೇವೆ ಎಂದು ನುಡಿಯುತ್ತಾರೆ. ನಮ್ಮ ತಂದೆಯವರು 1 ನೇ ಪ್ರತಿವಾದಿ ನನ್ನ ಮತ್ತು 2 ನೇ ಪ್ರತಿವಾದಿಯ ಪರಸ್ಪರ ಒಪ್ಪಿಗೆ ಮತ್ತು ಸಮ್ಮತಿಯಿಂದ ಮಾರಾಟ ಮಾಡಿದ್ದಾರೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು ನಾವು ಕ್ರಯ ಪತ್ರಕ್ಕೆ ಸಹಿ ಮಾಡಿರುವುದಿಲ್ಲ ಎಂದು ನುಡಿಯುತ್ತಾರೆ. ನನಗೆ 1 ನೇ ಪ್ರತಿವಾದಿ 3 ನೇ ಪ್ರತಿವಾದಿಗೆ  ಐಟಂ ನಂ.1 ಆಸ್ತಿಯನ್ನು ಮಾರಾಟ ಮಾಡಿರುವ ವಿಚಾರ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.